# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1100 |
| ಸದಸ್ಯರ ಹೆಸರು | : | ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 15.03.2021 |
| ಉತ್ತರಿಸುವ ಸಚಿವರು | : | ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿನ 1 ರಿಂದ 10ನೇ ತರಗತಿವರೆಗಿನ ಎಷ್ಟು ವಿದ್ಯಾರ್ಥಿಗಳು ಬಿಸಿಯೂಟ ಯೋಜನೆಯ ಫಲಾನುಭವಿಗಳಾಗಿದ್ದಾರೆ ; (ವಿವರ ಒದಗಿಸುವುದು) | ರಾಜ್ಯದಲ್ಲಿ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ 1 ರಿಂದ 10ನೇ ತರಗತಿಯವರೆಗೆ ಒಟ್ಟು 56,02,875 ವಿದ್ಯಾರ್ಥಿಗಳು ಬಿಸಿಯೂಟ ಯೋಜನೆಯ ಫಲಾನುಭವಿಗಳಾಗಿದ್ದಾರೆ. |
| ಆ) | ಪ್ರಸಕ್ತ ಸಾಲಿನಲ್ಲಿ ಮಕ್ಕಳಿಗೆ ಬಿಸಿಯೂಟ ನೀಡಲಾಗುತ್ತಿದೆಯೇ; | 2020-21ನೇ ಶೈಕ್ಷಣಿಕ ಶಾಲೆಗಳಲ್ಲಿ ಬಿಸಿಯೂಟವನ್ನು ಸಿದ್ಧಪಡಿಸಿ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿಲ್ಲ. ಬದಲಿಗೆ ವಿದ್ಯಾರ್ಥಿಗಳಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿ ಮತ್ತು ರಾಷ್ಟ್ರೀಯ ಆಹಾರ ಭದ್ರತಾ ಕಾಯಿದೆ-2013ರಲ್ಲಿನ ಮಾನದಂಡಗಳಂತೆ ನಿಗದಿತ ಪ್ರಮಾಣದ ಆಹಾರ ಧಾನ್ಯಗಳನ್ನು (ಅಕ್ಕಿ ಮತ್ತು ಗೋಧಿ) ಮತ್ತು ಅಡುಗೆ ತಯಾರಿಕಾ ವೆಚ್ಚದ ಮೊತ್ತಕ್ಕೆ ಸಮಾನಾಂತರವಾಗಿ ತೊಗರಿಬೇಳೆ, ಖಾದ್ಯತೈಲ ಮತ್ತು ಅಯೋಡಿಕರಿಸಿದ ಉಪ್ಪನ್ನು ಆಹಾರ ಭದ್ರತಾ ಭತ್ಯೆಯ ರೂಪದಲ್ಲಿ ನೀಡಲಾಗುತ್ತಿದೆ. |
| ಇ) | ಇಲ್ಲವಾದಲ್ಲಿ ಕಾರಣವೇನು; ಎಂದಿನಿಂದ ಪ್ರಾರಂಭಿಸಲಾಗುವುದು; | ಕೋವಿಡ್-19 ವೈರಾಣು ಸೋಂಕಿನ ಪರಿಣಾಮವಾಗಿ ಬದಲಾದ ಸನ್ನಿವೇಷದಿಂದಾಗಿ ಶಾಲೆಗಳನ್ನು ನಿಗದಿತ ಶೈಕ್ಷಣಿಕ ವೇಳಾಪಟ್ಟಿಯಂತೆ ಪೂರ್ಣ ಪ್ರಮಾಣದಲ್ಲಿ ಪ್ರಾರಂಭಿಸಲು ಸಾಧ್ಯವಾಗದ ಕಾರಣ ಹಾಗೂ ಶಾಲೆಗಳಲ್ಲಿ ಬಿಸಿಯೂಟ ನೀಡಿದರೆ ವಿದ್ಯಾರ್ಥಿಗಳು ಗುಂಪಾಗಿ ಸೇರಿ ಸಾಮಾಜಿಕ ಅಂತರ ಕಾಪಾಡಿಕೊಳ್ಳದೇ ಕೋವಿಡ್-19 ವೈರಾಣು ಸೋಂಕು ಹರಡುವ ಸಾಧ್ಯತೆ ಹೆಚ್ಚಾಗಿದ್ದ ಕಾರಣ ಮುನ್ನೆಚ್ಚರಿಕೆ ಕ್ರಮವಾಗಿ ವಿದ್ಯಾರ್ಥಿಗಳ ಆರೋಗ್ಯದ ಹಿತದೃಷ್ಟಿಯಿಂದ ಶಾಲೆಗಳಲ್ಲಿ ಬಿಸಿಯೂಟವನ್ನು ಸಿದ್ಧಪಡಿಸಿ ನೀಡುವ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿರುವುದಿಲ್ಲ.<br><br>ಶಾಲೆಗಳಲ್ಲಿ ಬಿಸಿಯೂಟವನ್ನು ಪ್ರಾರಂಭಿಸುವ ಅನುಮತಿ ಕೋರಿ ಕೇಂದ್ರ ಸರ್ಕಾರದ ಶಿಕ್ಷಣ ಮಂತ್ರಾಲಯಕ್ಕೆ ಪತ್ರ ಬರೆಯಲಾಗಿದ್ದು, ಅನುಮತಿ ನಿರೀಕ್ಷಿಸಿದೆ. |

| | | |
|---|---|---|
| ಈ) | ಬಿಸಿಯೂಟ ನೀಡದಿರುವುದರಿಂದ ಮಕ್ಕಳಿಗೆ ಪೋಷಕಾಂಶದ ಕೊರತೆ ಉಂಟಾಗುವ ಸಾಧ್ಯತೆ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಿಸಿಯೂಟ ನೀಡದಿರುವುದರಿಂದ ಮಕ್ಕಳಿಗೆ ಪೋಷಕಾಂಶದ ಕೊರತೆ ಉಂಟಾಗುವುದನ್ನು ತಪ್ಪಿಸಲು ಮಕ್ಕಳಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿ ಮತ್ತು ರಾಷ್ಟ್ರೀಯ ಆಹಾರ ಭದ್ರತಾ ಕಾಯಿದೆ-2013ರಲ್ಲಿನ ಮಾನದಂಡಗಳಂತೆ ನಿಗದಿತ ಪ್ರಮಾಣದ ಆಹಾರ ಧಾನ್ಯಗಳನ್ನು (ಅಕ್ಕಿ ಮತ್ತು ಗೋಧಿ) ಮತ್ತು ಅಡುಗೆ ತಯಾರಿಕಾ ವೆಚ್ಚದ ಮೊತ್ತಕ್ಕೆ ಸಮಾನಾಂತರವಾಗಿ ತೊಗರಿಬೇಳೆ, ಖಾದ್ಯತೈಲ ಮತ್ತು ಅಯೋಡಿಕರಿಸಿದ ಉಪ್ಪನ್ನು, ಆಹಾರ ಭದ್ರತಾ ಭತ್ಯೆಯ ರೂಪದಲ್ಲಿ ನೀಡಿ, ಮಕ್ಕಳಲ್ಲಿ ಪೋಷಕಾಂಶದ ಕೊರತೆಯಾಗದಂತೆ ಕ್ರಮವಹಿಸಲಾಗಿದೆ. |
| ಉ) | ಹಾಗಿದ್ದಲ್ಲಿ, ಬಿಸಿಯೂಟ ನೀಡುವ ಬಗ್ಗೆ ಸರ್ಕಾರದ ನಿಲುವೇನು? | ಶಾಲೆಗಳಲ್ಲಿ ಬಿಸಿಯೂಟವನ್ನು ನೀಡಲು ಅನುಮತಿ ಕೋರಿ ಕೇಂದ್ರ ಸರ್ಕಾರದ ಶಿಕ್ಷಣ ಮಂತ್ರಾಲಯಕ್ಕೆ ಪತ್ರ ಬರೆಯಲಾಗಿದ್ದು, ಅನುಮತಿ ನಿರೀಕ್ಷಿಸಿದೆ. ಕೇಂದ್ರ ಸರ್ಕಾರದಿಂದ ಅನುಮತಿ ದೊರೆತ ಕೂಡಲೇ ಪರಿಸ್ಥಿತಿ ಸುಧಾರಿಸಿದ ಬಳಿಕ ಸೂಕ್ತ ಮುನ್ನೆಚ್ಚರಿಕೆಗಳನ್ನು ಕೈಗೊಂಡು ಬಿಸಿಯೂಟನ್ನು ಪ್ರಾರಂಭಿಸಲು ಕ್ರಮ ಜರುಗಿಸಲಾಗುವುದು. |

ಇಪಿ 10 ಎಂಎಂಎಸ್ 2021

(ಎಸ್. ಸುರೇಶ್ ಕುಮಾರ್)

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು